**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಳೆನರಸೀಪುರ**

ಫ್ರಾಸ –12

**CC No**: 41/2020 ಚಾಸ- 14

| | |
|---|---|
| ಹೆಸರು | **ಹೆಚ್ ಕೆ ನಾಗರಾಜು** |
| ತಂದೆ ಹೆಸರು | **ಹೆಚ್ ಎಸ್ ಕರೀಗೌಡ** |
| ವಯಸ್ಸು | 60 **ವರ್ಷ** |
| ಉದ್ಯೋಗ | **ನಿವೃತ್ತ ಸಬ್ ಇನ್ಸ್‌ಪೆಕ್ಟರ್** |
| ವಾಸಸ್ಥಳ | **ಅರಕಲಗೂಡು** |

ದಿನಾಂಕಃ 02.05.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಸ.ಸ.ಅ ರವರಿಂದಃ–**

ನಾನು ದಿಃ 31.12.2018 ರಿಂದ 05.07.2022 ರವರೆಗೆ ನಾನು ಹಳ್ಳಿಮೈಸೂರು ಪೊಲೀಸಿ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 02.07.2019 ರಂದು ಬೆಳಗ್ಗೆ 11.30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ನಂ.76/2019 ರಂತೆ ಪ್ರಕರಣ ದಾಖಲಿಸಿಕೊಂಡು ಪ್ರ ವ ವರದಿ ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೆಲಾಧಿಕಾರಿಗಳಿಗೆ ನಿವೆದಿಸಿಕೊಂಡಿರುತ್ತೇನೆ. ನಂತರ ತನಿಖೆಯನ್ನು ಮುಂದುವರೆಸಿ ಬೆಳಗ್ಗೆ 11.45 ಗಂಟೆಗೆ ಘಟನಾ ಸ್ಥಳಕ್ಕೆ ಬೇಟಿ ನೀಡಿ ಚಾಸಾ 1 ರವರು ತೋರಿಸಿದ ಜಾಗದಲ್ಲಿ ಚಾಸಾ 2 ಮತ್ತು 3

ರವರ ಸಮಕ್ಷಮ ಬೆಳಗ್ಗೆ 11.45 ರಿಂದ 12.30 ರವರೆಗೆ ಸ್ಥಳ ಮಹಜರ್ ಕ್ರಮ ಜರುಗಿಸಿರುತ್ತೇನೆ. ಆ ಸಮಯಕ್ಕೆ ಫೊಟೋ ತೆಗಸಿರುತ್ತೇನೆ. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ 15 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಸಾಕ್ಷಿ ದೂರು ಮತ್ತು ಮಹಜರ್ ಅನ್ನು ನೋಡಿ ಗುರುತಿಸಿದ್ದು, ದೂರನ್ನು ಈಗಾಗಲೇ ನಿಪಿ 1 ಎಂದು ಗುರುತಿಸಿಸಲಾಗಿದ್ದು, ಸಾಕ್ಷಿದಾರರ ಸಹಿಯನ್ನು ನಿಪಿ 1(ಬಿ) ಎಂದು, ಮಹಜರ್ ಅನ್ನು ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿದ್ದು, ಸಾಕ್ಷಿದಾರರ ಸಹಿಯನ್ನು ನಿಪಿ 2(ಡಿ) ಎಂದು ಗುರುತಿಸಲಾಯಿತು. ಎಫ್ ಐ ಆರ್ ಅನ್ನು ನಿಪಿ 14 ಎಂದು ಸಾಕ್ಷಿದಾರರ ಸಹಿಯನ್ನು ನಿಪಿ 14(ಎ) ಎಂದು ಗುರುತಿಸಲಾಯಿತು. ಒರಿಜಿನಲ್ ಪೋಟೋ ಹಾಗೂ ಸಿ,ಡಿ. ಇಲ್ಲದೇ ಇರುವುದರಿಂದ ಅವುಗಳನ್ನು ನಿಶಾನೆಗೊಳಿಸಿರುವುದಿಲ್ಲ.

**<u>ಪಾಟೀಸವಾಲು ಆರೋಪಿ ಪರ ವಕೀಲರಿಂದ :-</u>**

ದಿಃ 02.07.2019 ರಂದು ಬೆಳಗ್ಗೆ 11.30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಂತರ ತನಿಖೆಯನ್ನು ಮುಂದುವರೆಸಿ ಬೆಳಗ್ಗೆ 11.45 ಗಂಟೆಗೆ ಘಟನಾ ಸ್ಥಳಕ್ಕೆ ಬೇಟಿ ನೀಡಿ ಚಾಸಾ 1 ರವರು ತೋರಿಸಿದ ಜಾಗದಲ್ಲಿ ಚಾಸಾ 2 ಮತ್ತು 3 ರವರ ಸಮಕ್ಷಮ ಬೆಳಗ್ಗೆ 11.45 ರಿಂದ 12.30 ರವರೆಗೆ ಸ್ಥಳ ಮಹಜರ್ ಕ್ರಮ ಜರುಗಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆ ಸಮಯಕ್ಕೆ ಫೊಟೋ ತೆಗಸಿರುತ್ತೇನೆ ಎಂದು ಸುಳ್ಳು

ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ. ಹೇ. ಕೇ. ಸ. ಇದೆ.

(ಶ್ರೀಮತಿ. ನಿವೇದಿತಾ ಮಹಾಂತೇಶ್ ಮುನವಳ್ಳಿಮಠ್)
ಹಿ.ವ್ಯ.ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ರವರು ಹೊಳೆನರಸೀಪುರ.